ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 40
ಸದಸ್ಯರ ಹೆಸರು : ಶ್ರೀ. ಎನ್. ರವಿಕುಮಾರ್
ಉತ್ತರಿಸಬೇಕಾದ ದಿನಾಂಕ : 15-07-2019
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

ಕ್ರ. ಸಂ	ವಿಷಯ	ಉತ್ತರ
ಅ)	ಮತಾಂತರಗೊಂಡ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮತಾಂತರಗೊಂಡ ಬಳಿಕವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ;	ಪರಿಶಿಷ್ಟ ಜಾತಿ ಜನರು ಹಿಂದೂ, ಸಿಖ್ ಮತ್ತು ಬೌದ್ಧ ಧರ್ಮವನ್ನು ಆಚರಿಸುತ್ತಿರುವವರು ಪರಿಶಿಷ್ಟ ಜಾತಿ ಮೀಸಲಾತಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ. ಆದರೆ ಪರಿಶಿಷ್ಟ ಜಾತಿ ಜನರು ಕ್ರಿಶ್ಚಿಯನ್, ಇಸ್ಲಾಂ ಧರ್ಮಕ್ಕೆ ಸೇರಿದ್ದಲ್ಲಿ ಮೀಸಲಾತಿ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ. ಪರಿಶಿಷ್ಟ ಪಂಗಡದವರು ಯಾವುದೇ ಧರ್ಮಕ್ಕೆ ಸೇರಿದರೂ ಕೂಡ ಮೀಸಲಾತಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.
ಆ)	ರಾಜ್ಯದಲ್ಲಿ ಮತಾಂತರ ನಿಷೇಧ ಕಾನೂನು ಜಾರಿಗೆ ತರುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ; ಮುಂದಿದ್ದಲ್ಲಿ, ಯಾವಾಗ ಮತಾಂತರ ನಿಷೇಧ ಕಾನೂನು ಜಾರಿಗೆ ತರಲಾಗುವುದು;	ಯಾವುದೇ ಪ್ರಸ್ತಾಪವಿರುವುದಿಲ್ಲ. ಈ ಬಗ್ಗೆ ಯಾವುದೇ ಕಾನೂನು ಜಾರಿಗೆ ಇಲ್ಲದೇ ಇರುವುದರಿಂದ ಮತಾಂತರಗೊಂಡವರ ಬಗ್ಗೆ ಯಾವುದೇ ಅಂಕಿ ಅಂಶಗಳು ಲಭ್ಯವಿರುವುದಿಲ್ಲ.
ಇ)	2 ವರ್ಷಗಳಲ್ಲಿ ರಾಜ್ಯದಲ್ಲಿ ಕಳೆದ ಮತಾಂತರಗೊಂಡವರ ಸಂಖ್ಯೆ ಎಷ್ಟು; ಮತಾಂತರಗೊಂಡವರು ಯಾವ ಧರ್ಮದಿಂದ ಯಾವ ಧರ್ಮಕ್ಕೆ ಮತಾಂತರಗೊಂಡಿರುತ್ತಾರೆ ?	

ಸಕಇ 48 ಎಸ್‌ಎಡಿ 2019

(ಪ್ರಿಯಾಂಕ್ ಖರ್ಗೆ)
ಸಮಾಜ ಕಲ್ಯಾಣ ಸಚಿವರು.